**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.72/2024**

| | | |
|---|---|---|
| ಸಾಕ್ಷಿದಾರರ ಹೆಸರು | : ರೇಣುಕಾ ಡಿ.ವಿ | ಪ್ರಾಸಾ-7 |
| ಗಂಡನ ಹೆಸರು | : ಜಗದೀಶ್ ಎಸ್.ಜಿ | ಚಾಸಾ-14 |
| ವಯಸ್ಸು | : 49 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ 06.03.2026. |
| ವಾಸಸ್ಥಳ | : ಬಣಕಲ್ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ನವೆಂಬರ್ 2023 ರಿಂದ ಜನವರಿ 2024 ರವರೆಗೂ ಮತ್ತು ಜೂನ್ 2024 ರಿಂದ ಇಲ್ಲಿಯವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.11.02.2023 ರಂದು ಪ್ರಕರಣದ ಕಡತವನ್ನು ಚಾಸಾ-13 ರವರಿಂದ ಪಡೆದುಕೊಂಡು, ಚಾಸಾ-11 ರವರು ನೀಡಿದ ಕಲಂ 65 ಬಿ ರಡಿಯ ದೃಢೀಕೃತ ಪ್ರತಿಯನ್ನು ಪಡೆದುಕೊಂಡಿರುತ್ತೇನೆ. ಆರೋಪಿಯ ವಿರುದ್ಧ ಆರೋಪವು ಸಾಬೀತಾದ ಕಾರಣ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಕೊಂಡಿರುತ್ತೇನೆ.

ಸಾಕ್ಷಿಯು ನಿಪಿ-6 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಡಿ.ಕೆ.ಪಿ. ವಕೀಲರಿಂದಃ**

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಕರಣದ ತನಿಖಾಧಿಕಾರಿಯು ಮೊಬೈಲ್ Screenshot ನ ಪ್ರತಿಯನ್ನು ನನಗೆ ನೀಡಿರುವುದಿಲ್ಲ. ಕಲಂ 65 ಬಿ ರಡಿಯ ಪ್ರತಿಯನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.